# ಕರ್ನಾಟಕ ಸರ್ಕಾರ

ಸಂಖ್ಯೆ ಗ್ರಾಅಪ 311 ಉಖಾಯೋ 2013 (ಭಾಗ2)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು ದಿನಾಂಕ 26-08-2013

## ತಿದ್ದುಪಡಿ ಆದೇಶ

ವಿಷಯ: ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ **"ಮುಖ್ಯ ಲೆಕ್ಕಾಧಿಕಾರಿ"** ಹುದ್ದೆಯನ್ನು **"ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ"** ಎಂದು ತಿದ್ದುಪಡಿ ಮಾಡುವ ಬಗ್ಗೆ

ಓದಲಾಗಿದೆ.
1) ಕರ್ನಾಟಕ ಸರ್ಕಾರದ ನಡವಳಿ ಸಂಖ್ಯೆ ಗ್ರಾಅಪ 267 ಪಬವ 2013 ದಿನಾಂಕ 06-08-2013
2) ಸರ್ಕಾರಿ ಆದೇಶ ಸಂಖ್ಯೆ ಗ್ರಾಅಪ 41 ಉಖಾಯೋ 2008 ದಿನಾಂಕ 13-12-2007

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಹಾಗೂ ಸರ್ಕಾರ ವಹಿಸಬಹುದಾದ ಇತರೆ ಗ್ರಾಮೀಣಾಭಿವೃದ್ಧಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವನ್ನು ಕರ್ನಾಟಕ ಸರ್ಕಾರವು ಮೇಲೆ ಓದಲಾದ ಕ್ರ.ಸಂ. 1 ರ ಆದೇಶದಲ್ಲಿ ಸೃಜಿಸಿ ಮಂಜೂರು ಮಾಡಿದೆ.

ಮೇಲೆ ಓದಲಾದ ಕ್ರ.ಸಂ 2 ರಲ್ಲಿ ಸೃಜನೆಯಾಗಿರುವ ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪ್ರಸ್ತುತ ಅಸ್ತಿತ್ವದಲ್ಲಿರುವ ಮುಖ್ಯಸ್ಥರು (ಹಣಕಾಸು ಮತ್ತು ಲೆಕ್ಕಪತ್ರ) ಹುದ್ದೆಯನ್ನು ಸರ್ಕಾರದ ಆದೇಶದಲ್ಲಿ ಮುಖ್ಯ ಲೆಕ್ಕಾಧಿಕಾರಿ ಎಂದು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಲ್ಲಿ ಮುಂದುವರೆಸಲಾಗಿದ್ದು, ಆಡಳಿತಾತ್ಮಕ ಹಿತದೃಷ್ಟಿಯಿಂದ ಮುಖ್ಯ ಲೆಕ್ಕಾಧಿಕಾರಿಗಳ ಹುದ್ದೆಯನ್ನು **"ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ"** ಎಂದು ಪದನಾಮೀಕರಿಸಿ ತಿದ್ದುಪಡಿ ಮಾಡಿದೆ.

ಈ ಆದೇಶವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಗ್ರಾಅಪ 311 ಉಖಾಯೋ 2013 (ಭಾಗ-2) ರ ಟಿಪ್ಪಣಿ ಕಂಡಿಕೆ ಸಂಖ್ಯೆ 3 ರಲ್ಲಿನ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುನೀಷ್ ಮೌದ್ಗಿಲ್)
ನಿರ್ದೇಶಕರು,
ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ
ಹಾಗೂ ಪದನಿಮಿತ್ತ ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2) ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ,
4) ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
5) ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಬೆಳಗಾಂ, ಮೈಸೂರು ಮತ್ತು ಗುಲ್ಬರ್ಗ ವಿಭಾಗ
6) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
7) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
8) ಅನುಷ್ಠಾನ ಇಲಾಖೆಯ ಮುಖ್ಯಸ್ಥರು,
9) ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು
10) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗೆ
11) ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು
12) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
13) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
14) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
15) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳು
16) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾ ಅಧಿಕಾರಿ, ಅರಣ್ಯ ಇಲಾಖೆ, ಅರಣ್ಯ ಭವನ, ಬೆಂಗಳೂರು
17) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು. ಕಾರ್ಯದರ್ಶಿಗಳು,(ಪಂ.ರಾಜ್), ಹೆಚ್ಚುವರಿ ಕಾರ್ಯದರ್ಶಿ(ಆಡಳಿತ), ಉಪ ಕಾರ್ಯದರ್ಶಿ(ಆಡಳಿತ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು
18) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
19) ಎಲ್ಲಾ ನಿರ್ದೇಶಕರುಗಳು/ಮುಖ್ಯಸ್ಥರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
20) ನಿರ್ದೇಶಕರು, NIC, ಬೆಂಗಳೂರು
21) ಸಿಸ್ಟಂ ಮ್ಯಾನೇಜರ್, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
22) ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು
23) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ತರಬೇತಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು
24) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಗೆಜೆಟ್ ಪ್ರಕಟಣೆಗಾಗಿ
25) ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಕರ್ನಾಟಕ ವಿಕಾಸ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರಿಗೆ- ಮುಂದಿನ ಸಂಚಿಕೆಯಲ್ಲಿ ಇದನ್ನು ಪ್ರಚುರ ಪಡಿಸಲು ಕೋರಿದೆ.

26. ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.